ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲು 2ನೇ ಎದುರುದಾರರ ಪರ ವಕೀಲರಿಂದಃ-

ನನಗೆ ಈಗ 50 ವರ್ಷ ವಯಸ್ಸಾಗಿರುತ್ತದೆ. ನನ್ನ ಸಾಕ್ಷಿ ಪ್ರಮಾಣ ಪತ್ರದ 2ನೇ ಕಂಡಿಕೆಯಲ್ಲಿ ಹೇಳಿರುವಂತೆ ಹೊರರೋಗಿಯಾಗಿ ಚಿಕಿತ್ಸೆ ಪಡೆದುಕೊಂಡ ಬಗ್ಗೆ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ಅದೇ ರೀತಿ ನನ್ನ ಸಾಕ್ಷಿ ಪ್ರಮಾಣ ಪತ್ರದಲ್ಲಿ ಹೇಳಿರುವಂತೆ ಆಸ್ಪತ್ರೆಯ ಚಿಕಿತ್ಸೆಗಾಗಿ ಮತ್ತು ಇತರೆ ವೆಚ್ಚಗಳಿಗಾಗಿ 3 ಲಕ್ಷ ಖರ್ಚು ಮಾಡಿರುವ ಬಗ್ಗೆ ನ್ಯಾಯಾಲಯಕ್ಕೆ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಪಿಲೆಚೇರಿಯಲ್ಲಿ ಕೆಲಸಕ್ಕೆ ಹೋಗಿ ಪ್ರತಿ ದಿನ 800 ಸಂಪಾದನೆ ಮಾಡುತ್ತಿದ್ದೆ ಎಂದು ತೋರಿಸಲು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಅಪಘಾತವಾದ ದಿನ ನನಗೆ ಡಿ.ಎಲ್ ಇಲ್ಲದೇ ನಾನೇ ನನ್ನ ವಾಹನವನ್ನು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹೋಗಿ ಎದುರುದಾರರ ವಾಹನಕ್ಕೆ ಡಿಕ್ಕಿಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಪರಿಹಾರ ಹಣ ಪಡೆಯುವ ಸಲುವಾಗಿ ಸುಳ್ಳು ಅರ್ಜಿ ಸಲ್ಲಿಸಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ- ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ ಬಿ.ಟಿ)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯಾ ಮಂಡಳಿಯ
ಪೀಠಾಧಿಕಾರಿಗಳು